Received on 12/8/20
NVP

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:ಶೈವಿ:56:ಹೆ.ಶು.ವ:2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ:12.08.2020

# ಸುತ್ತೋಲೆ

ವಿಷಯ: ಇಲಾಖಾ ವ್ಯಾಪ್ತಿಯ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರವೇಶ ಪ್ರಕ್ರಿಯೆ ಸೀಟು ಹಂಚಿಕೆ ಹಾಗೂ ಶುಲ್ಕದ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/37/ಪದವಿ.ಶುಲ್ಕ/2019-20 ದಿನಾಂಕ:13-06-2020.
2. ಈ ಕಛೇರಿಯ ಪರಿಚಲನಾ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/251/ಸ್ನಾತ್ತಕೋತ್ತರ ಶುಲ್ಕ/2019-20 ದಿನಾಂಕ:13-07-2020.
3. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/184/ಮ.ಲೇ.ಆ/2019-20 ದಿನಾಂಕ:20-03-2020.
4. ವಿವಿಧ ಸಂಘಟನೆಗಳಂದ ಸ್ವೀಕೃತಗೊಂಡಿರುವ ದೂರಿನ ಪತ್ರಗಳು.

********

ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ 2020-21ನೇ ಸಾಲಿಗೆ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭಿಸಲು ಹಾಗೂ ಪದವಿ ಮತ್ತು ಸ್ನಾತ್ತಕೋತ್ತರ ಪದವಿ ತರಗತಿಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಂದ ಶುಲ್ಕ ವಸೂಲಾತಿ ಕುರಿತು ಉಲ್ಲೇಖ (1) ಮತ್ತು (2) ರಲ್ಲಿ ವಸೂಲು ಮಾಡಬೇಕಾಗಿರುವ ಶುಲ್ಕ ವಿವರ ಹಾಗೂ ಸ್ಪಷ್ಟ ಮಾರ್ಗಸೂಚಿಗಳನ್ನು ಈಗಾಗಲೇ ಜಾರಿಗೊಳಿಸಲಾಗಿದೆ.

ಆದಾಗ್ಯೂ ಉಲ್ಲೇಖ (4) ರ ಪತ್ರಗಳಲ್ಲಿ ಕೆಲವು ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಹಿಂದುಗಳಿದ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಮೆರಿಟ್ ಆಧಾರದ ಮೇಲೆ ಗರಿಷ್ಟ ಅಂಕಗಳನ್ನು ಪಡೆದಿದ್ದರೂ ಸಹ ರೋಸ್ಟರ್ ಪ್ರಕಾರ ಸೀಟು ಹಂಚಿಕೆ ಮಾಡಲಾಗುತ್ತಿಲ್ಲ ಮತ್ತು ಮೀಸಲಾತಿ ನಿಯಮವನ್ನು ಉಲ್ಲಂಘಿಸುತ್ತಿದ್ದಾರೆ, ಹಾಗೂ ಸರ್ಕಾರ ನಿಗಧಿ ಪಡಿಸಿದ ಪ್ರವೇಶ ಶುಲ್ಕಕ್ಕಿಂತ ಹೆಚ್ಚುವರಿಯಾಗಿ ಶುಲ್ಕವನ್ನು ಪಡೆಯುತ್ತಿರುವುದರಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡಲು ಸಾಧ್ಯವಾಗತಿಲ್ಲವೆಂದು ತಿಳಿಸಿ ಅನುದಾನಿತ ಕಾಲೇಜುಗಳ ವಿರುದ್ಧ ಅಗತ್ಯ ಕ್ರಮವಹಿಸುವಂತೆ ಕೋರಿರುತ್ತಾರೆ.

*ಈ ಹಿನ್ನಲೆಯಲ್ಲಿ 2020-21 ನೇ ಸಾಲಿಗೆ ಇಲಾಖಾ ವ್ಯಾಪ್ತಿಯ ಎಲ್ಲಾ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಕುರಿತು ಉಲ್ಲೇಖ(3)ರಲ್ಲಿ ತಿಳಿಸಿರುವಂತೆ ಪ್ರವೇಶ ಬಯಸಿ ಬರುವ ವಿದ್ಯಾರ್ಥಿನಿಯರಿಗೆ ಬೋಧನ ಮತ್ತು ಪ್ರಯೋಗಾಲಯ ಶುಲ್ಕಗಳಂದ ವಿನಾಯಿತಿ ನೀಡಿ ಹಾಗೂ ವಿನಾಯಿತಿ ನೀಡಿದ ಶುಲ್ಕದ ಮೊತ್ತವನ್ನು ಸರ್ಕಾರದಿಂದ ಮರುಭರಿಸುವ ಕುರಿತು ಮಾರ್ಗದರ್ಶನ ನೀಡಲಾಗಿದೆ. ಉಳಿದಂತೆ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಂದ ನಿಗಧಿತ ಬೋಧನ ಮತ್ತು ಪ್ರಯೋಗಾಲಯ ಶುಲ್ಕಗಳನ್ನು ಸಂಗ್ರಹಿಸಿ ಜಮಾ ಮಾಡುವ ಬಗ್ಗೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ:ಯುಪಿಸಿ:2014 ದಿನಾಂಕ:18-10-2014ರಲ್ಲಿ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಕಾಲೇಜು ಶಿಕ್ಷಣ) 2003ರ ನಿಯಮ 18(4)ಕ್ಕೆ ತಿದ್ದುಪಡಿ ಆದೇಶವನ್ನು ಹೊರಡಿಸಿದ್ದು ಅದರಂತೆ ಕ್ರಮ ವಹಿಸಲು ತಿಳಿಸಲಾಗಿದೆ.*

*ಮುಂದುವರೆದು ಸರ್ಕಾರದ ನಿಯಮದಂತೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ರೋಸ್ಟರ್ ನಿಯಮಗಳನ್ನು ಪಾಲಿಸುವಂತೆ ಹಾಗೂ ಇಲಾಖೆಯು ನಿಗಧಿಪಡಿಸಿರುವ ಶುಲ್ಕಗಳ ಮಾಹಿತಿಯನ್ನು ಕಡ್ಡಾಯವಾಗಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವಂತೆ ಹಾಗೂ ಸರ್ಕಾರ ನಿಗಧಿ ಪಡಿಸಿರುವ ಶುಲ್ಕವನ್ನು ಮಾತ್ರ ವಿದ್ಯಾರ್ಥಿಗಳಂದ ವಸೂಲಿ ಮಾಡುವಂತೆ ಸೂಚಿಸಲಾಗಿದೆ.*

--2

*ಒಂದು ವೇಳೆ ವಿದ್ಯಾರ್ಥಿಗಳಿಂದ ಹೆಚ್ಚುವರಿಯಾಗಿ ಶುಲ್ಕವನ್ನು ಪಡೆದಲ್ಲಿ ಸಂಬಂಧ ಪಟ್ಟ ಖಾಸಗಿ ಅನುದಾನಿತ ಪದವಿ ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯ ವಿರುದ್ಧ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.*

13/8

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ

1) *ಇಲಾಖಾ ವ್ಯಾಪ್ತಿಯ ಎಲ್ಲಾ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಆಡಳಿತ ಮಂಡಳಿ/ಪ್ರಾಂಶುಪಾಲರುಗಳಿಗೆ- ಅಗತ್ಯ ಕ್ರಮ ವಹಿಸಲು.*
2) ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ- ತಮ್ಮ ವ್ಯಾಪ್ತಿಯ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಪ್ರವೇಶಾತಿ ಶುಲ್ಕ ಕುರಿತಂತೆ ಈ ಸುತ್ತೋಲೆಯಲ್ಲಿ ತಿಳಿಸಿರುವಂತೆ ಅಗತ್ಯ ಕ್ರಮ ವಹಿಸಲು ಸೂಕ್ತ ನಿರ್ದೇಶನ ನೀಡಲು ಸೂಚಿಸಲಾಗಿದೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು ಮಾಹಿತಿ ವಿಭಾಗ ಕೇಂದ್ರ ಕಛೇರಿ ಬೆಂಗಳೂರು-ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.

ಪ್ರತಿಯನ್ನು

1) ವಿವಿಧ ಸಂಘಟನೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು ಇವರಿಗೆ- ಮಾಹಿತಿಗಾಗಿ
2) ಕಛೇರಿ ಪ್ರತಿ